ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಸಪ್ರಾನೇ/25/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:07.10.2021.

# ಆದೇಶ

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ **ವಿವಿಧ** ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾಗಿ, ಸರ್ಕಾರದಿಂದ ನೇಮಕಾತಿ ಆದೇಶ ಹೊರಡಿಸಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡುವ ಬಗ್ಗೆ.

ಉಲ್ಲೇಖ:1) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಡಿಸಿಇ/2017, ದಿನಾಂಕ:04.02.2017.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/14/ಡಿಸಿಇ/2020, ದಿನಾಂಕ:12.06.2020.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/226/ಡಿಸಿಇ/2018, ದಿನಾಂಕ:23.06.2020.
4) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/128/ಡಿಸಿಇ/2017, ದಿನಾಂಕ:15.07.2017 ಮತ್ತು ದಿನಾಂಕ:07.09.2017.
5) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/31/ಡಿಸಿಇ/2021, ದಿನಾಂಕ:05.07.2021.
6) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/24/ಡಿಸಿಇ/2021, ದಿನಾಂಕ:22.07.2021.

*****

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ **ಕನ್ನಡ, ಹಿಂದಿ, ಇತಿಹಾಸ, ಅರ್ಥಶಾಸ್ತ್ರ, ವಾಣಿಜ್ಯಶಾಸ್ತ್ರ, ನಿರ್ವಹಣಾಶಾಸ್ತ್ರ** ಮತ್ತು **ರಸಾಯನಶಾಸ್ತ್ರ** ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿದ ಅಂತಿಮ/ಪರಿಷ್ಕೃತ ಆಯ್ಕೆ ಪಟ್ಟಿಯನ್ನು ಸರ್ಕಾರವು ಉಲ್ಲೇಖ-(1), (2) ಮತ್ತು (3)ರ ಸರ್ಕಾರದ ಅಧಿಸೂಚನೆಗಳಲ್ಲಿ ಪ್ರಕಟಿಸಿದೆ. ಕಾಲೇಜು ಶಿಕ್ಷಣ ಇಲಾಖಾ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ)-ನಿಯಮಗಳು 2014ರ ನಿಯಮ-9ರ ಉಪ-ನಿಯಮ (2) ಮತ್ತು (3) ರ ಅನುಸಾರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ, ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಅಭ್ಯರ್ಥಿಗಳಿಗೆ ಸರ್ಕಾರವು ಉಲ್ಲೇಖ-(4), (5) ಮತ್ತು (6)ರ ಅಧಿಸೂಚನೆಗಳಲ್ಲಿ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕಾತಿ ಆದೇಶ ಹೊರಡಿಸಿದೆ.

ಅದರಂತೆ, ಉಲ್ಲೇಖ-(4), (5) ಮತ್ತು (6)ರ ಸರ್ಕಾರದ ಅಧಿಸೂಚನೆಗಳನ್ವಯ ನೇಮಕಾತಿ ಹೊಂದಿರುವ **ಕನ್ನಡ, ಹಿಂದಿ, ಇತಿಹಾಸ, ಅರ್ಥಶಾಸ್ತ್ರ, ವಾಣಿಜ್ಯಶಾಸ್ತ್ರ, ನಿರ್ವಹಣಾಶಾಸ್ತ್ರ ಮತ್ತು ರಸಾಯನಶಾಸ್ತ್ರ** ವಿಷಯಗಳ ಕೆಳಕಂಡ ಸಹಾಯಕ ಪ್ರಾಧ್ಯಾಪಕರುಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡುವ ಸಂಬಂಧ **ದಿನಾಂಕ:29.09.2021/05.10.2021 ರಂದು** ಸ್ಥಳ ಆಯ್ಕೆ ಕೌನ್ಸಿಲಿಂಗ್‌ನ್ನು ಆಯೋಜಿಸಲಾಗಿದ್ದು, ಸದರಿ ಕೌನ್ಸ್‌ಲಿಂಗ್‌ನಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಈ ಕೆಳಕಂಡಂತೆ ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಕಾಲೇಜನ್ನು ಆಯ್ಕೆಮಾಡಿಕೊಂಡಿರುತ್ತಾರೆ. ಆದ್ದರಿಂದ ಸದರಿಯವರುಗಳನ್ನು ಪ್ರಸ್ತುತ ಜಾರಿಯಲ್ಲಿರುವ **ಯು.ಜಿ.ಸಿ. ವೇತನ ಶ್ರೇಣಿ ರೂ.57,700-1,82,400** ರಲ್ಲಿ ಕೆಲವೊಂದು ಷರತ್ತುಗಳನ್ನು ವಿಧಿಸಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

## ಸಾಮಾನ್ಯ (ಮಿಕ್ಕುಳಿದ ವೃಂದ)

| ಕ್ರ. ಸಂ. | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಡಿಸಿಇ/2017, ದಿ:04.07.2017ರಆಯ್ಕೆ ಪಟ್ಟಿಯಲ್ಲಿನ ಕ್ರ.ಸಂ. | ಹೆಸರು ಶ್ರೀ/ಕು॥/ಶ್ರೀಮತಿ | ವಿಷಯ | ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|---|
| 1 | 211 | ರವಿಕುಮಾರ ಎ.ಆರ್. | ಕನ್ನಡ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಣನೂರು, ಹಾಸನ ಜಿಲ್ಲೆ. |
| 2 | 216 | ಸವಿತಾ ಹಲಸಗಿ | ಕನ್ನಡ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಡಹಳ್ಳಿ, ಬಾಗಲಕೋಟೆ ಜಿಲ್ಲೆ. |

.....2

| | | | | |
|---|---|---|---|---|
| 3 | 305 | ಸಯ್ಯದ್ ಸಾಬ್ ಮುಜಾವರ್ | ಕನ್ನಡ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಬಾಸೂರ, ಹಾವೇರಿ ಜಿಲ್ಲೆ. |
| 4 | 549 | ಸುಹೇಲ ಸತ್ತೀಕರ | ಹಿಂದಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುಕ್ಕೇರಿ, ಬೆಳಗಾವಿ ಜಿಲ್ಲೆ. |
| 5 | 550 | ಸ್ವರ್ಣ ಕುಮಾರಿ | ಹಿಂದಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು, ಉಡುಪಿ ಜಿಲ್ಲೆ. |
| 6 | 551 | ಮಲಕಪ್ಪ ಜಾಬಗೊಂಡೆ | ಹಿಂದಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಲ್ಲಾಪುರ, ಉತ್ತರ ಕನ್ನಡ ಜಿಲ್ಲೆ. |
| 7 | 108 | ರೇಣುಕಾ ಬಾಯಿ | ಇತಿಹಾಸ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಹಾಗಾಂವ್ ಕ್ರಾಸ್, ಕಲಬುರಗಿ. |
| 8 | 113 | ಆಶಾರಾಣಿ | ಇತಿಹಾಸ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಿಳಿಕೆರೆ, ಮೈಸೂರು ಜಿಲ್ಲೆ. |
| 9 | 94 | ನೀತ ಎಸ್ | ಅರ್ಥಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆಸರಘಟ್ಟ, ಬೆಂಗಳೂರು. |
| 10 | 17 | ಶುಭಾ ಕೆ | ರಸಾಯನಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಾಮದಪದವು, ದಕ್ಷಿಣ ಕನ್ನಡ ಜಿಲ್ಲೆ. |

**ಸಾಮಾನ್ಯ (ಹೈ-ಕ ವೃಂದ)**

| ಕ್ರ. ಸಂ. | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಡಿಸಿಇ/2017, ದಿ:04.07.2017ರ ಆಯ್ಕೆ ಪಟ್ಟಿಯಲ್ಲಿನ ಕ್ರ.ಸಂ. | ಹೆಸರು ಶ್ರೀ/ಶ್ರೀಮತಿ | ವಿಷಯ | ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|---|
| 1 | 21 | ಶಶಿಕಲಾ ಬಿ.ಜಿ | ನಿರ್ವಹಣಾಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಿಟ್ನಾಳ, ಕೊಪ್ಪಳ ಜಿಲ್ಲೆ. |

**ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರ. ಸಂ. | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/14/ಡಿಸಿಇ/2020, ದಿ:12.06.2020ರ ಆಯ್ಕೆ ಪಟ್ಟಿಯಲ್ಲಿನ ಕ್ರ.ಸಂ. | ಹೆಸರು ಶ್ರೀ/ಶ್ರೀಮತಿ | ವಿಷಯ | ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|---|
| 1 | 466 | ರಾಧಾಕೃಷ್ಣ ನಾಯಕ್ | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು, ಉಡುಪಿ ಜಿಲ್ಲೆ. |

**ವಿಷಯ: ನಿರ್ವಹಣಾಶಾಸ್ತ್ರ**

**ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರ. ಸಂ. | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/226/ಡಿಸಿಇ/2018, ದಿ:23.06.2020ರ ಆಯ್ಕೆ ಪಟ್ಟಿಯಲ್ಲಿನ ಕ್ರ.ಸಂ. | ಹೆಸರು ಶ್ರೀ/ಶ್ರೀಮತಿ | ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|
| 1 | 1 | ಅಮೀತ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಟಿ.ನರಸೀಪುರ, ಮೈಸೂರು ಜಿಲ್ಲೆ. |
| 2 | 2 | ಮಹಾಂತೇಶ್ ವೀರಣ್ಣ ಕರೀಕಟ್ಟಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭಟ್ಕಳ, ಉತ್ತರ ಕನ್ನಡ ಜಿಲ್ಲೆ. |
| 3 | 6 | ಕಿರಣ್ ಜೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತರೀಕೆರೆ, ಚಿಕ್ಕಮಗಳೂರು ಜಿಲ್ಲೆ. |

.......3

| | | | |
|---|---|---|---|
| 4 | 7 | ರವೀಶ ಎನ್.ಎಸ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಿಪ್ಪನ್‌ಪೇಟೆ, ಶಿವಮೊಗ್ಗ ಜಿಲ್ಲೆ |
| 5 | 8 | ರೋಷನ್.ಕೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಳೆನರಸೀಪುರ, ಹಾಸನ ಜಿಲ್ಲೆ |
| 6 | 12 | ಸುಬ್ರಹ್ಮಣ್ಯ ಕೆ.ಸಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾರ್ಕಳ, ಉಡುಪಿ ಜಿಲ್ಲೆ. |
| 7 | 13 | ಶರತ್ ಕುಮಾರ್ ಹಾರಾಡಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೆಯಂಗಡಿ, ದಕ್ಷಿಣ ಕನ್ನಡ ಜಿಲ್ಲೆ. |
| 8 | 15 | ಜಗದೀಶ್ ಎಸ್ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೆಯಂಗಡಿ, ದಕ್ಷಿಣ ಕನ್ನಡ ಜಿಲ್ಲೆ. |

ಮೇಲ್ಕಂಡ ಸಹಾಯಕ ಪ್ರಾಧ್ಯಾಪಕರುಗಳು ಸ್ಥಳ ನಿಯುಕ್ತಿಗೊಳಸಲಾದ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ.

**<u>ಷರತ್ತುಗಳು:</u>**

1) ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) ವಿಶೇಷ- ನಿಯಮಗಳು, 2014ರ ನಿಯಮ-9ರ ಉಪನಿಯಮ (2) ಮತ್ತು (3) ರೊಂದಿಗೆ ಓದಿಕೊಂಡಂತೆ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಗಳು, 1957ರ ನಿಯಮ 5ರ ಅನುಸಾರ ಈ ನೇಮಕಾತಿಯ ಸಂದರ್ಭದಲ್ಲಿ ವಿವಿಧ ದಿನಾಂಕಗಳ ಅಧಿಸೂಚನೆಯಲ್ಲಿ ಸರ್ಕಾರವು ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿನ ಜ್ಯೇಷ್ಠತೆಯು ಅಂತಿಮವಾಗಿರುತ್ತದೆ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜ್ಯೇಷ್ಠತೆಯನ್ನು ಕ್ಲೈಮು ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.

2) ಮೇಲೆ ತಿಳಿಸಿರುವ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಸ್ಥಳ ನಿಯುಕ್ತಿ ಆದೇಶವನ್ನು ಡೌನ್‌ಲೋಡ್ ಮಾಡಿಕೊಂಡು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ ದಿನಾಂಕದಿಂದ 15 ದಿವಸಗಳೊಳಗಾಗಿ ಸ್ಥಳ ನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಅಭ್ಯರ್ಥಿಗಳ ನೇಮಕಾತಿ ಆದೇಶ ತಂತಾನೇ ರದ್ದಾಗುತ್ತದೆ.

3) ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು.

4) ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.

5) ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಹಾಗೂ ಜನರಲ್ ಲಾ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಹಾಗೂ ಇತರೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.

6) ನೇಮಕಾತಿಗೊಂಡ ಅಭ್ಯರ್ಥಿಗಳಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.

7) ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಶನ್ ಮತ್ತು ರಿಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.

8) ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರ ವೇತನ ಹಾಗೂ ಇತರೆ ಸೇವಾ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ.

9) ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುವುದಿಲ್ಲ.

10) ಮೇಲೆ ನಮೂದಿಸಿರುವ ಅಭ್ಯರ್ಥಿಗಳು ದಿನಾಂಕ:01.04.2006ರ ನಂತರ ಸರ್ಕಾರಿ ಸೇವೆಗೆ ಸೇರಿರುವುದರಿಂದ ಅವರು ನಿಯಮಾನುಸಾರ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

11) ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.

12) ಸದರಿ ನೇಮಕಾತಿ ಹಾಗೂ ಸ್ಥಳನಿಯುಕ್ತಿ ಆದೇಶವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಎಲ್ಲಾ ಪೀಠಗಳಲ್ಲಿ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯಲ್ಲಿ ದಾಖಲಾಗಿರುವ ರಿಟ್ ಅರ್ಜಿ/ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿನ ಪಾಲನೆಗೆ ಒಳಪಟ್ಟಿರುತ್ತದೆ.

13) ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 43 ಸೇವನೆ 2008, ದಿನಾಂಕ:07.03.2012 ರಲ್ಲಿ ಜಾರಿಗೊಳಸಿರುವ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ಸದರಿ ನಿಯಮಗಳಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ತಿದ್ದುಪಡಿ ಆದೇಶಗಳಲ್ಲಿ ನಿರ್ದಿಷ್ಟಪಡಿಸಿರುವಂತೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ.

ಆಯುಕ್ತರು
**ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1. ಮೇಲ್ಕಾಣಿಸಿದ ಅಭ್ಯರ್ಥಿಗಳಗೆ – ಅಗತ್ಯ ಕ್ರಮಕ್ಕಾಗಿ; ಅಭ್ಯರ್ಥಿಗಳಗೆ ಪ್ರತ್ಯೇಕವಾಗಿ ಸ್ಥಳನಿಯುಕ್ತಿ ಆದೇಶವನ್ನು ಕಳುಹಿಸಿಕೊಡಲಾಗುವುದಿಲ್ಲ. ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು.

2. ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳಗೆ– ತಮ್ಮ ಕಾಲೇಜಿಗೆ ಸ್ಥಳನಿಯುಕ್ತಿಸಲಾದ ಅಭ್ಯರ್ಥಿಯನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವ ಮೊದಲು ಶೈಕ್ಷಣಿಕ ವಿದ್ಯಾರ್ಹತೆ, ಮೀಸಲಾತಿ ಹಾಗೂ ಇನ್ನಿತರೆ ಅಗತ್ಯ ಮೂಲ ದಾಖಲಾತಿಗಳನ್ನು ಕಡ್ಡಾಯವಾಗಿ ಪರಿಶೀಲಿಸತಕ್ಕದ್ದು, ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಯಾವುದಾದರೂ ನ್ಯೂನ್ಯತೆಗಳು ಕಂಡುಬಂದಲ್ಲಿ ಕೂಡಲೇ ಈ ಕಛೇರಿಗೆ ವರದಿ ಮಾಡುವುದು.

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು– ಮಾಹಿತಿಗಾಗಿ.

2) ಕರ್ನಾಟಕ ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ–1, ಲೆಕ್ಕಪರಿಶೋಧನೆ–2), ಬೆಂಗಳೂರು.

3) ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.

4) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ ಮೈಸೂರು/ ಮಂಗಳೂರು / ಧಾರವಾಡ/ ಗುಲ್ಬರ್ಗಾ / ಶಿವಮೊಗ್ಗ,

5) ಮ್ಯಾನೇಜರ್/ಅಧೀಕ್ಷಕರು, ವರ್ಗಾವಣೆ ಮತ್ತು ನಿಯೋಜನೆ ವಿಭಾಗ, ಮಾಹಿತಿ ತಂತ್ರಜ್ಞಾನ ವಿಭಾಗ, ಕಾನೂನು ಕೋಶ ವಿಭಾಗ, ಸೇವಾ ವಿಭಾಗ–1 & 2, ಮತ್ತು ಬಡ್ತಿ ಮತ್ತು ಸ್ಥಾನೀಕರಣ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು –ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

6) ಕಛೇರಿ ಪ್ರತಿ.